**Akashvani : Bangalore**
**Regional Bulletin In Kannada**
**26.04.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**26.04.2025 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ಪಾಕಿಸ್ತಾನಿ ಪ್ರಜೆಗಳನ್ನು ತಾಯ್ನಾಡಿಗೆ ಕಳಿಹಿಸುವ ಪ್ರಕ್ರಿಯೆ ಆರಂಭ - ಗೃಹ ಸಚಿವ ಡಾ. ಜಿ. ಪರಮೇಶ್ವರ್**

**೨. ದೇಶಾದ್ಯಂತ ೪೭ ಸ್ಥಳಗಳಲ್ಲಿ ಉದ್ಯೋಗ ಮೇಳ ; ೫೧ ಸಾವಿರ ನವ ಉದ್ಯೋಗಿಗಳಿಗೆ ನೇಮಕಾತಿ ಪತ್ರ ವಿತರಣೆ**

**೩. ಯಾವುದೇ ಕಾರಣಕ್ಕೂ ಗ್ಯಾರೆಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ ; ಮುಖ್ಯಮಂತ್ರಿ ಸಿದ್ದರಾಮಯ್ಯ**

**೪. ಸಿಇಟಿ ಪರೀಕ್ಷೆಯಲ್ಲಿ ಜನಿವಾರ ತೆಗೆಸಿರುವ ಪ್ರಕರಣ ; ಉಚ್ಚನ್ಯಾಯಾಲಯಕ್ಕೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆ**

**೫. ನಾಳೆ ಬೆಳಗ್ಗೆ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮ ; ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ಪ್ರಧಾನಿ ಸಂವಾದ**

**<><*<><>*><>**

ರಾಜ್ಯದಲ್ಲಿರುವ ಪಾಕಿಸ್ತಾನಿ ಪ್ರಜೆಗಳನ್ನು ಸರ್ಕಾರ ತಾಯ್ನಾಡಿಗೆ ಕಳುಹಿಸುತ್ತಿದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿಕಾರಿಗಳು ಪಾಕಿಸ್ತಾನಿ ಪ್ರಜೆಗಳನ್ನು ಗುರುತಿಸುವ ಪ್ರಕ್ರಿಯೆಯಲ್ಲಿದ್ದು ಈ ಕುರಿತಂತೆ ಪೊಲೀಸ್ ವರಿಷ್ಠಾಧಿಕಾರಿ ಶ್ರೇಣಿಯ ಎಲ್ಲಾ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರದ ನಿರ್ದೇಶನಗಳನ್ನು ಸರ್ಕಾರ ಪಾಲಿಸುತ್ತಿದ್ದು ಪಾಕಿಸ್ತಾನದ ವಿದ್ಯಾರ್ಥಿಗಳನ್ನು ವಾಪಸ್ ಕಳುಹಿಸಲಾಗುತ್ತದೆ" ಎಂದು ಸ್ಪಷ್ಟಪಡಿಸಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಳಿಕ ರಾಜ್ಯದಲ್ಲಿಯೂ ಭದ್ರತೆಯನ್ನು ಹೆಚ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ದೇಶಾದ್ಯಂತ ಇಂದು ಒಂದೇ ದಿನ ೪೭ ಸ್ಥಳಗಳಲ್ಲಿ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದ್ದು ಬೆಂಗಳೂರಿನ ಎನ್‌ಎಸಿಐಎ ಆವರಣದಲ್ಲಿ ನಡೆದ ಉದ್ಯೋಗ ನಿಯುಕ್ತಿ ಪತ್ರ ವಿತರಣಾ ಕಾರ್ಯಕ್ರಮವನ್ನು ಇಂದು ಪ್ರಧಾನಿ ನರೇಂದ್ರ ಮೋದಿ ಯವರು ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಕೇಂದ್ರ ಸಚಿವ ಡಾ. ವೀರೇಂದ್ರ ಕುಮಾರ್ ಅವರು ಇತ್ತೀಚೆಗೆ ಆಯ್ಕೆಯಾಗಿರುವ ನೂತನ ೧೫ ಉದ್ಯೋಗಿಗಳಿಗೆ ಉದ್ಯೋಗ ನಿಯುಕ್ತಿ ಪತ್ರ ವಿತರಣೆ ಮಾಡಿದರು.

<><*<><>*><>

೨೦೪೭ ರಲ್ಲಿ ಭಾರತ ಅಭಿವೃದ್ಧಿ ಹೊಂದಿದ ದೇಶವಾಗುತ್ತದೆ ಎಂದು ನನಗೆ ವಿಶ್ವಾಸವಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಖಾತೆ ರಾಜ್ಯ ಸಚಿವೆ ರಕ್ಷಾ ನಿಖಿಲ್ ಖಡ್ಸೆ ಹೇಳಿದ್ದಾರೆ. ಹುಬ್ಬಳ್ಳಿಯ ಬಿವಿಬಿ ಎಂಜಿನಿಯರಿಂಗ್ ಕಾಲೇಜಿನ ದೇಶಪಾಂಡೆ ಫೌಂಡೇಷನ್ ಸಭಾಂಗಣದಲ್ಲಿ ಇಂದು ಏರ್ಪಡಿಸಿದ್ದ ಉದ್ಯೋಗ ಮೇಳ ಕಾರ್ಯಕ್ರಮದಲ್ಲಿ ನೇಮಕಾತಿ ಪತ್ರ ವಿತರಣೆ ಮಾಡಿ ಮಾತನಾಡಿದ ಅವರು, 'ಉದ್ಯೋಗ ಪಡೆದ ಯುವಕರು ಆತ್ಮನಿರ್ಭರ ಯೋಜನೆ ಸಾಕಾರಕ್ಕೆ ಶ್ರಮಿಸಬೇಕು ಎಂದು ತಿಳಿಸಿದ್ದಾರೆ. 'ದೇಶವನ್ನು ಅಭಿವೃದ್ಧಿ ಪಥದಲ್ಲಿ ತೆಗೆದುಕೊಂಡು ಹೋಗುವ ಜವಾಬ್ದಾರಿ ಯುವಕರ ಮೇಲಿದೆ. ಪ್ರತಿ ವರ್ಷ ಎರಡು ಬಾರಿ ಉದ್ಯೋಗ ಮೇಳ ಆಯೋಜಿಸಿ ನೇಮಕಾತಿ ಪತ್ರ ನೀಡುತ್ತಿದ್ದು, ಯುವಕರು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದ್ದಾರೆ.

**ಧ್ವನಿ : ಸಚಿವೆ ರಕ್ಷಾ ನಿಖಿಲ್ ಖಡ್ಸೆ ( ೩೪ ಸೆಕೆಂಡ್ಸ್ )**

<><*<><>*><>

ಯಾವುದೇ ಕಾರಣಕ್ಕೂ ಗ್ಯಾರೆಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ. ಗ್ಯಾರೆಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಗಳನ್ನು ಮುಂದುವರೆಸುತ್ತೇವೆ. ಇದಕ್ಕೆ ಸಾಕ್ಷಿ ಇಂದು ಶಂಕುಸ್ಥಾಪನೆ ಮಾಡುತ್ತಿರುವ ಅಭಿವೃದ್ಧಿ ಕಾರ್ಯಗಳೇ ಸಾಕ್ಷಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಪಿರಿಯಾಪಟ್ಟಣ ತಾಲ್ಲೂಕಿನ ಕ್ರೀಡಾಂಗಣ ಆವರಣದಲ್ಲಿ ಹಮ್ಮಿಕೊಂಡಿದ್ದ ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದ ೪೩೯.೮೮ ಕೋಟಿ ರೂಪಾಯಿ ಮೌಲ್ಯದ ವಿವಿಧ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಮತ್ತು ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನ್ ರಾಂ ರವರ ಜಯಂತಿ ಮಹೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಧ್ವನಿ : ಸಿದ್ದರಾಮಯ್ಯ

<><*<><>*><>

ಸಾಮಾನ್ಯ ಪರೀಕ್ಷೆ ವೇಳೆ ಜನಿವಾರ ತೆಗೆಸಿರುವ ಪ್ರಕರಣದ ಕುರಿತಂತೆ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಉಚ್ಛನ್ಯಾಯಾಲಯಕ್ಕೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದೆ. ರಾಜ್ಯದ ಹಲವೆಡೆ ಇಂತಹ ಘಟನೆಗಳು ನಡೆದಿರುವುದರಿಂದ ಶಿಕ್ಷಣ ಹಕ್ಕು ಉಲ್ಲಂಘನೆಯಾಗಿದೆ. ಈ ಹಿನ್ನೆಲೆಯಲ್ಲಿ ಪರೀಕ್ಷೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಮರು ಪರೀಕ್ಷೆ ನಡೆಸುವಂತೆ ಮನವಿ ಮಾಡಿದೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೨೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ಶಿಕ್ಷಣದ ಗುರಿ ಕೇವಲ ಅಂಕಗಳಿಗೆ, ರ್‍ಯಾಂಕ್ ಗಳಿಕೆಗೆ ಸಿಮೀತವಾಗಬಾರದು. ಅದರ ಜೊತೆಯಲ್ಲಿ ಆದರ್ಶ ವ್ಯಕ್ತಿಗಳಾಗಿ ಸಮಾಜಕ್ಕೆ ಮತ್ತು ದೇಶಕ್ಕೆ ಅಮೂಲ್ಯ ಸಂಪತ್ತಾಗಿ ಪರಿವರ್ತನೆಯಾಗಬೇಕು. ಈ ರೀತಿಯ ಮಾರ್ಪಾಡು ಮಾಡುವವರು ಮತ್ತು ಹೊಂದುವವರು ನಿಜವಾದ ದೇಶಪ್ರೇಮಿಗಳು ಎಂದು ಕರ್ನಾಟಕ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅಭಿಪ್ರಾಯಪಟ್ಟಿದ್ದಾರೆ. ಉಮ್ಮತ್ ಒನ್ ಕೊಡಗು ಚಾರಿಟೇಬಲ್ ಟ್ರಸ್ಟ್ ವತಿಯಿಂದ ಮಡಿಕೇರಿಯಲ್ಲಿ ಸಮುದಾಯ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಉತ್ತಮ ಸಮಾಜ ದೇಶಕ್ಕೆ ಅತ್ಯಗತ್ಯ, ಯುವ ಜನತೆ ಶಿಕ್ಷಣದ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಮತ್ತು ಪ್ರೀತಿ, ವಿಶ್ವಾಸ ಸಂಪಾದಿಸಬೇಕು ಎಂದು ತಿಳಿಸಿದ್ದಾರೆ.

<><*<><>*><>

ಸಾರ್ವಜನಿಕರಲ್ಲಿ ಮಲೇರಿಯಾ ಕಾಯಿಲೆ ಕುರಿತು ಅರಿವು ಮೂಡಿಸಬೇಕೆಂಬುವುದು ಜಾಥದ ಪ್ರಮುಖ ಉದ್ದೇಶವಾಗಿದೆ. ಪ್ರತಿಯೊಬ್ಬರೂ ತಮ್ಮ ಸುತ್ತಮುತ್ತಲಿನ ನಿವಾಸಿಗಳಲ್ಲಿ ಹಾಗೂ ಕುಟುಂಬಸ್ಥರಲ್ಲಿ ಮಲೇರಿಯಾ ಕಾಯಿಲೆ ಬಗ್ಗೆ ಜಾಗೃತಿ ಮೂಡಿಸಿ ಎಂದು ಮಂಡ್ಯ ಜಿಲ್ಲಾ ಮಲೇರಿಯಾ ನಿಯಂತ್ರಣ ಅಧಿಕಾರಿ ಡಾ.ಕಾಂತರಾಜು ಕರೆ ನೀಡಿದ್ದಾರೆ. ವಿಶ್ವ ಮಲೇರಿಯ ದಿನಾಚರಣೆ ಪ್ರಯುಕ್ತ ಆಯೋಜಿಸಲಾಗಿದ್ದ ಮಲೇರಿಯ ನಿಯಂತ್ರಣ ಕುರಿತ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಗದಗ ಜಿಲ್ಲೆಯ ಮುಂಡರಗಿಯ ತಾಲೂಕು ಆರೋಗ್ಯ ಇಲಾಖೆಯ ವತಿಯಿಂದ ವಿಶ್ವ ಮಲೇರಿಯಾ ದಿನಾಚಾರಣೆ ಕಾರ್ಯಕ್ರಮ ಜರುಗಿತು. ತಾಲೂಕು ವೈದ್ಯಾಧಿಕಾರಿ ಡಾ. ಲಕ್ಷ್ಮಣ ಪೂಜಾರ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

<><*<><>*><>

ರಾಜ್ಯದಲ್ಲಿ ಪರಿಶಿಷ್ಟ ಜಾತಿ ಸಮುದಾಯದಲ್ಲಿ ಅನೇಕ ಉಪಜಾತಿಗಳಿದ್ದು ಅವುಗಳ ಜನಸಂಖ್ಯೆ ಮತ್ತು ಇತರೆ ಪೂರಕ ಮಾಹಿತಿಗಳನ್ನು ಕಲೆಹಾಕುವ ಕೆಲಸ ಮೇ ಮೊದಲ ವಾರದಿಂದ ಶುರುವಾಗಲಿದೆ. ಈ ಸಮೀಕ್ಷೆಯಲ್ಲಿ ಸಮುದಾಯದವರು ಕರಾರುವಕ್ಕಾಗಿ ಮಾಹಿತಿ ಒದಗಿಸುವಂತೆ ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಕಲ್ಪಿಸುವುದಕ್ಕಾಗಿ ಮೇ ೫ ರಿಂದ ಗಣತಿಯನ್ನು ನಡೆಸಲಾಗುತ್ತದೆ. ಇದಕ್ಕೆ ‘ಪರಿಶಿಷ್ಟ ಜಾತಿ, ಉಪ ಜಾತಿ ಸಮಗ್ರ ಸಮೀಕ್ಷೆ-೨೦೨೫’ ಎಂದು ಹೆಸರಿಡಲಾಗಿದೆ. ರಾಜ್ಯ ಸರ್ಕಾರವು ಒಳಮೀಸಲಾತಿಗಾಗಿ ರಚಿಸಿರುವ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್‌ದಾಸ್ ನೇತೃತ್ವದ ಆಯೋಗದ ಶಿಫಾರಸಿನ ಅನ್ವಯ ಈ ಸಮೀಕ್ಷೆ ನಡೆಯಲಿದೆ ಎಂದು ತಿಳಿಸಿದ್ದಾರೆ.

<><*<><>*><>

ರಾಜ್ಯ ಸಾರಿಗೆ ಸಂಸ್ಥೆ ಇದೇ ಪ್ರಪ್ರಥಮ ಬಾರಿಗೆ ಅಪಘಾತದಲ್ಲಿ ಗಾಯಗೊಂಡು ಕಾಲು ಕಳೆದು ಕೊಂಡ ಸಿಬ್ಬಂದಿಗೆ ೨೫ ಲಕ್ಷ ರೂಪಾಯಿ ಹಾಗೂ ಅಪಘಾತದಲ್ಲಿ ಮೃತಪಟ್ಟ ಸಿಬ್ಬಂದಿಗಳ ಕುಟುಂಬಕ್ಕೆ ತಲಾ ೧ ಕೋಟಿ ರೂಪಾಯಿಯಂತೆ ಇಬ್ಬರಿಗೆ ೨ ಕೋಟಿ ರೂಪಾಯಿ ನೀಡಲಿದೆ. ಅಪಘಾತ ಹೊರತುಪಡಿಸಿ ಇತರೆ ಕಾರಣಗಳಿಂದ ಮೃತಪಟ್ಟ ೩೧ ಸಿಬ್ಬಂದಿಗಳ ಅವಲಂಬಿತರಿಗೆ ತಲಾ ೧೦ ಲಕ್ಷ ರೂಪಾಯಿಯಂತೆ ಒಟ್ಟು ೩.೧೦ ಕೋಟಿ ರೂಪಾಯಿ ಪರಿಹಾರವನ್ನು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು ವಿತರಣೆ ಮಾಡಿದರು.

<><*<><>*><>

ಮಡಿಕೇರಿಯಲ್ಲಿ ಕಳೆದ ೧೯ ದಿನಗಳಿಂದ ನಡೆಯುತ್ತಿರುವ ಕೊಡವ ಕುಟುಂಬಗಳ ನಡುವಿನ ಹಾಕಿ ಪಂದ್ಯಾವಳಿ ಮುದ್ದಂಡ ಕಪ್ ನಾಳೆ ಸಮಾರೊಪಗೊಳ್ಳಲಿದೆ. ಮಡಿಕೇರಿಯ ಫೀಲ್ಡ್ ಮಾಷಲ್ ಕಾರ್ಯಪ್ಪ ಕಾಲೇಜು ಮೈದಾನದಲ್ಲಿ ನಡೆಯಲಿರುವ ಅಂತಿಮ ಪಂದ್ಯದಲ್ಲಿ ಪ್ರಶಸ್ತಿಗಾಗಿ ೩ ಬಾರಿಯ ಛಾಂಪಿಯನ್ ಚೇಂದಂಡ ತಂಡವನ್ನು ಮಂಡೇಪಂಡ ತಂಡ ಎದುರಿಸಲಿದೆ. ಇಂದು ನಡೆದ ಸೆಮಿಫೈನಲ್ ಪಂದ್ಯದಲ್ಲಿ ಮೂರು ಬಾರಿಯ ಕೌಟುಂಬಿಕ ಹಾಕಿ ಪಂದ್ಯಾವಳಿ ಚಾಂಪಿಯನ್ ನೆಲ್ಲಮಕ್ಕಡ ತಂಡದ ವಿರುದ್ಧ ಮಂಡೇಪಂಡ ತಂಡ ೫-೪ ಗೋಲುಗಳ ಅಂತರದ ಗೆಲವು ಸಾಧಿಸಿದೆ. ಮತ್ತೊಂದು ಸೆಮಿಫೈನಲ್‌ನಲ್ಲಿ ಚೇಂದಂಡ ತಂಡ ೩-೧ ಗೋಲುಗಳ ಅಂತರದಿಂದ ಎದುರಾಳಿ ಕುಪ್ಪಂಡ ತಂಡವನ್ನು ಮಣಿಸಿ ಫೈನಲ್ ಪ್ರವೇಶಿಸಿದೆ. ಮುದ್ದಂಡ ಕುಟುಂಬಸ್ಥರು ಮಡಿಕೇರಿಯಲ್ಲಿ ಆಯೋಜಿಸಿದ್ದ ಪಂದ್ಯಾವಳಿಯಲ್ಲಿ ದಾಖಲೆಯ ೩೯೬ ತಂಡಗಳು ಪಾಲ್ಗೊಂಡಿದ್ದವು.

<><*<><>*><>

ಬೆಳಗಾವಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ ಮತ್ತು ತೋಟಗಾರಿಕೆ ಇಲಾಖೆಯ ಸಹಯೋಗದಲ್ಲಿ ನಗರದ ಹ್ಯೂಮ್ ಪಾರ್ಕ್‌ನಲ್ಲಿ ಇಂದಿನಿಂದ ಮೂರು ದಿನಗಳ ಕಾಲ ವಿವಿಧ ಬಗೆಯ ಮಾವು ಹಾಗೂ ಜೇನು ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮೇಳ ಆಯೋಜಿಸಲಾಗಿದ್ದು, ಶಾಸಕ ರಾಜು ಸೇಠ್ ಉದ್ಘಾಟಿಸಿದರು. ಮಹಾರಾಷ್ಟ್ರದ ಘಟ್ಟ ಪ್ರದೇಶದಲ್ಲಿ ಬೆಳೆಯಲಾಗುವ ಆಪುಸ್, ಕೇಸರ, ಪೈರಿ, ಮಲ್ಲಿಕಾದಂತಹ ಮಾವುಗಳ ಜೊತೆಗೆ ಕಳೆದ ವರ್ಷದಿಂದ ಮಾರುಕಟ್ಟೆಗೆ ಪರಿಚಯಿಸಲಾದ ಬೆಳಗಾವಿ ಬ್ರ್ಯಾಂಡ್ ಮಾವಿನ ಹಣ್ಣುಗಳ ಮಾರಾಟಕ್ಕೆ ವ್ಯವಸ್ಥೆ ಮಾಡಲಾಗಿದ್ದು, ಇಂದು ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ಲಭಿಸಿದೆ, ಯಾವುದೇ ಮಧ್ಯವರ್ತಿಗಳಿಗೆ ಅವಕಾಶ ಕಲ್ಪಿಸದೇ ರೈತರು ತಾವು ಬೆಳೆದ ಹಣ್ಣುಗಳು ಹಾಗೂ ಜೇನಿನ ಮಾರಾಟಕ್ಕೆ ಅವಕಾಶ ಕಲ್ಪಿಸಿರುವುದು ಮೇಳದ ವಿಶೇಷತೆಯಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**